ಸುದ್ದಿ ಸಿಂಚನ

ಕಾರ್ಖಾನೆ ಹೊರಸೂಸುವ ಕಲುಷಿತ ನೀರು- ಗಾಳಿ ನಿಯಂತ್ರಿಸಲು ಆಗ್ರಹ

ಕಂಪ್ಲಿ: ಜಿಂದಾಲ್ ಕಾರ್ಖಾನೆಯಿಂದ ಹೊರ ಬಿಡಲಾಗುತ್ತಿರುವ ವಿಷಗಾಳಿ ಹಾಗೂ ತ್ಯಾಜ್ಯ ನೀರನ್ನು ನಿಯಂತ್ರಿಸಿ ಸ್ಥಳೀಯರಿಗೆ ಉತ್ತಮ ವಾತಾವರಣ ಒದಗಿಸಿಕೊಡುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಮುಂದಾಗಬೇಕು ಎಂದು ಭಾರತೀಯ ದಲಿತ ಪ್ಯಾಂಥರ್‌ನ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ಶಿವಕುಮಾರ್‌ಒತ್ತಾಯಿಸಿದ್ದಾರೆ.ಈ ಕುರಿತು ಪಟ್ಟಣದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಂದಾಲ್ ಕಾರ್ಖಾನೆಯು ಪ್ರತಿನಿತ್ಯ ವಿಷಗಾಳಿಯನ್ನು ಹೊರ ಬಿಡುತ್ತಿರುವುದರಿಂದ ಜಿಂದಾಲ್ ಸುತ್ತಮುತ್ತಲಿರುವ ಮನೆಗಳಿಗೆ ದೂಳು ಬರುತ್ತಿದೆ. ಇದರಿಂದಾಗಿ ಇಲ್ಲಿನ ಸಾರ್ವಜನಿಕರಿಗೆ ಕ್ಯಾನ್ಸರ್, ಟಿ.ಬಿ. ಹಾಗೂ ಚರ್ಮ ರೋಗದ ಕಾಯಿಲೆಗಳು ಬರುತ್ತಿವೆ. ಅಲ್ಲದೇ ಕೃಷಿ ಚಟುವಟಿಕೆಗೂ ಇದು ಬಹು ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ ಎಂದರು. ರೈತರು ತಮ್ಮ ಜಮೀನಿನಲ್ಲಿ ಬೆಳೆದ ಜೋಳ, ಈರುಳ್ಳಿ ಸೇರಿ ಅನೇಕ ಬೆಳೆಗಳು ಹಾಳಾಗುತ್ತಿವೆ. ಇನ್ನು ಕಾರ್ಖಾನೆಯಿಂದ ಪ್ರತಿನಿತ್ಯ ಕಲುಷಿತ ನೀರನ್ನು ದರೋಜಿ ಕೆರೆಗೆ ಬಿಡಲಾಗುತ್ತಿದ್ದು, ದರೋಜಿ ಕೆರೆಯ ನೀರು ಕಲುಷಿತಗೊಂಡಿದೆ. ರೈತರ ಜಮೀನು ಭೂಮಿಗಳು ಫಲವತ್ತತೆಯನ್ನು ಕಳೆದುಕೊಳ್ಳುತ್ತಿವೆ. ಈ ಕುರಿತು ಸಂಬಂಧ ಪಟ್ಟಂತಹ ಅಧಿಕಾರಿಗಳು ಎಚ್ಚತ್ತುಕೊಂಡು ಸಾರ್ವಜನಿಕರು ಹಾಗೂ ರೈತರ ಹಿತ ದೃಷ್ಟಿಯಿಂದಾಗಿ ಕಾರ್ಖಾನೆ ಹೊರ ಸೂಸುವ ಕಲುಷಿತ ಗಾಳಿ ಹಾಗೂ ನೀರನ್ನು ಶುದ್ಧಿಕರಿಸಿ ಬಿಡುವಂತೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿಕೊಂಡರು. ಈ ಕುರಿತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಮನವಿ ಸಲ್ಲಿಸಲಾಗಿದ್ದು, ಅಧಿಕಾರಿಗಳು ಕಾರ್ಖಾನೆಯವರಿಗೆ ನೋಟಿಸ್ ಸಹ ನೀಡಿದ್ದಾರೆ. ತ್ವರಿತ ಗತಿಯಲ್ಲಿ ಕ್ರಮ ಕೈಗೊಂಡು ಸ್ಥಳೀಯರಿಗೆ ಉತ್ತಮ ಪರಿಸರವನ್ನು ನಿರ್ಮಿಸಿಕೊಡುವಲ್ಲಿ ಅಧಿಕಾರಿಗಳು ಮುಂದಾಗಬೇಕು ಒಂದು ವೇಳೆ ನಮ್ಮ ಮನವಿಗೆ ಸ್ಪಂದಿಸಿ ಕ್ರಮ ಕೈಗೊಳ್ಳದಿದ್ದಲ್ಲಿ ಹೋರಾಟ ಹಾದಿ ಹಿಡಿಯಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪುರಸಭೆ ಸಾಮಾನ್ಯ ಸಭೆ ತಡವಾಗಿ ಆರಂಭ

ಸಂಡೂರು: ಪಟ್ಟಣದ ಪುರಸಭೆಯ ಸಾಮಾನ್ಯ ಸಭೆ ನಿಗದಿತ ಸಮಯಕ್ಕೆ ಆರಂಭವಾಗದ ಕಾರಣ ಆರಂಭದಲ್ಲಿ ಅರ್ಧ ಗಂಟೆವರೆಗೆ ಕಾದಿದ್ದ ಬಿಜೆಪಿ ಸದಸ್ಯರು ಸಭೆಯನ್ನು ಬಹಿಷ್ಕರಿಸಿ ಹೊರ ನಡೆದರು.ನಿಗದಿತ ಸಮಯ ಮುಗಿದು ಅರ್ಧ ಗಂಟೆಯಾದರೂ ಸಭೆ ಆರಂಭವಾಗಿಲ್ಲ. ಈ ಹಿನ್ನೆಲೆಯಲ್ಲಿ ತಾವು ಸಭೆಯಿಂದ ಹೊರ ಹೋಗುತ್ತಿರುವುದಾಗಿ ಬಿಜೆಪಿ ಸದಸ್ಯರಾದ ಅಬ್ದುಲ್ ಮುನಾಫ್, ದುರ್ಗಮ್ಮ, ಆಶಾ, ಲಕ್ಷ್ಮೀದೇವಿ, ಹಟ್ಟಿ ರತ್ನಮ್ಮ, ದೀಪಾ ಡಿ. ಮುಖ್ಯಾಧಿಕಾರಿ ಕೆ.ಜಯಣ್ಣ ಅವರಿಗೆ ತಿಳಿಸಿ, ಸಭೆಯಿಂದ ಹೊರ ನಡೆದರು. ಪುರಸಭೆ ಅಧ್ಯಕ್ಷ ಸಿರಾಜ್ ಹುಸೇನ್, ಉಪಾಧ್ಯಕ್ಷೆ ಎಂ.ಸಿ. ಲತಾ, ಆಡಳಿತ ಕಾಂಗ್ರೆಸ್ ಪಕ್ಷದ ಸದಸ್ಯರು ಸಭೆಗೆ ಬರುವ ಹೊತ್ತಿಗೆ ಸಭೆಗೆ ಆಗಮಿಸಿದ್ದ ಬಿಜೆಪಿ ಸದಸ್ಯರು ತಮ್ಮ ಮನೆಗಳಿಗೆ ಹೊರಟು ಹೋಗಿದ್ದರು. ಬಿಜೆಪಿ ಸದಸ್ಯರನ್ನು ಸಭೆಗೆ ಕರೆಸುವ ಪ್ರಯತ್ನ ನಡೆಯಿತಾದರೂ ಸಫಲವಾಗಲಿಲ್ಲ. ಆಗ ಸಭೆಯನ್ನು ಅಧ್ಯಕ್ಷರು ಮುಂದೂಡಿದರು. ಈ ಕುರಿತು ಪತ್ರಕರ್ತರೊಂದಿಗೆ ಮಾತನಾಡಿದ ಪುರಸಭೆ ಅಧ್ಯಕ್ಷ ಸಿರಾಜ್ ಹುಸೇನ್, ಸಮಾರಂಭವೊಂದಕ್ಕೆ ತೆರಳಿದ್ದರಿಂದ ಸಭೆಗೆ ಬರಲು ಸ್ವಲ್ಪ ತಡವಾಯಿತು. ಅಷ್ಟರಲ್ಲಿ ಕೆಲ ಸದಸ್ಯರು ಹೊರ ಹೋಗಿದ್ದರು. ಸಭೆ ಮುಂದೂಡಿದ್ದೇವೆ. ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಶೀಘ್ರದಲ್ಲಿ ಸಾಮಾನ್ಯ ಸಭೆಯ ದಿನಾಂಕ ನಿಗದಿಪಡಿಸಿ ಸಭೆ ನಡೆಸಲಾಗುವುದು ಎಂದರು.

ಬಳ್ಳಾರಿಯ ಭಾರತೀಯ ಜನತಾ ಪಕ್ಷದ ನಾಯಕರಲ್ಲಿ ಪೈಪೋಟಿ ಶುರು | ಆಕಾಂಕ್ಷಿಗಳಿಂದ ತೆರೆಮರೆಯ ಪ್ರಯತ್ನ

ಬಿಜೆಪಿಗೆ ನೂತನ ಜಿಲ್ಲಾ ಸಾರಥಿ ಯಾರು?

• **ಮಂಜುನಾಥ ಕೆ.ಎಂ.**
ಕನ್ನಡಪ್ರಭ ವಾರ್ತೆ ಬಳ್ಳಾರಿ

ಬಿಜೆಪಿಯ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಪಕ್ಷದ ನಾಯಕರಲ್ಲಿ ಪೈಪೋಟಿ ಶುರುವಾಗಿದೆ. ಶೀಘ್ರದಲ್ಲಿಯೇ ಪಕ್ಷದ ನೂತನ ಜಿಲ್ಲಾಧ್ಯಕ್ಷ ನೇಮಕ ಪ್ರಕ್ರಿಯೆ ಬೆಂಗಳೂರಿನಲ್ಲಿ ಜರುಗಲಿದ್ದು, ಈ ಸಂಬಂಧ ಆಕಾಂಕ್ಷಿಗಳು ತೆರೆಮರೆಯ ಪ್ರಯತ್ನ ನಡೆಸಿದ್ದಾರೆ.

ನಗರಕ್ಕೆ ಇತ್ತೀಚೆಗೆ ವೀಕ್ಷಕರಾಗಿ ಆಗಮಿಸಿದ್ದ ಪಕ್ಷದ ಹಿರಿಯ ಮುಖಂಡ ಅರುಣ್ ಶಹಾಪೂರ್‌ಪಕ್ಷದ ಮುಖಂಡರ ಸಭೆ ನಡೆಸಿ, ಅಭಿಪ್ರಾಯ ಸಂಗ್ರಹಿಸಿದ್ದಾರೆ. ಸಭೆಯಲ್ಲಿ ಅನೇಕರ ಹೆಸರು ಪ್ರಸ್ತಾಪವಾಗಿವೆ. ವಿಧಾನಪರಿಷತ್ ಸದಸ್ಯ, ವೀರಶೈವ ಸಮುದಾಯದ ಮುಖಂಡ ವೈ.ಎಂ. ಸತೀಶ್, ಹಾಲಿ ಅಧ್ಯಕ್ಷ ಅನಿಲ್ ನಾಯ್ಡು, ಗೋನಾಳ್ ರಾಜಶೇಖರಗೌಡ ಹೆಸರನ್ನು ಅಂತಿಮಗೊಳಿಸಲಾಗಿದೆ. ಈ ಮೂವರ ಪೈಕಿ ಓರ್ವರಿಗೆ ಪಕ್ಷದ ಜಿಲ್ಲಾ ಸಾರಥ್ಯ ವಹಿಸುವ ಅವಕಾಶ ಸಿಗಲಿದೆ.

ಆಕಾಂಕ್ಷಿಗಳು ಯಾರಿದ್ದರು?: ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಉಡೇದ್ ಸುರೇಶ್, ಮಾಜಿ ಬುಡಾ ಅಧ್ಯಕ್ಷ ದಮ್ಮೂರು ಶೇಖರ್, ಐನಾಥ ರೆಡ್ಡಿ, ದರಪ್ಪ ನಾಯಕ, ಪಕ್ಷದ ನಗರ ಘಟಕ ಅಧ್ಯಕ್ಷ ವೆಂಕಟೇಶ್ ಆಕಾಂಕ್ಷಿಗಳಾಗಿದ್ದು, ಸಭೆಯಲ್ಲಿ ಇವರ ಹೆಸರು ಪ್ರಸ್ತಾಪಿಸಲಾಗಿದೆ.

ಗೋನಾಳ್ ರಾಜಶೇಖರ ಗೌಡ ಸಭೆಯಲ್ಲಿ ಗೈರಾಗಿದ್ದು ಇವರ ಪರವಾಗಿ ಬೆಂಬಲಿಗರು ಹೆಸರು ಪ್ರಸ್ತಾಪಿಸಿದ್ದಾರೆ. ಇದೇ ವೇಳೆ ಸತೀಶ್ ಅವರನ್ನು ಜಿಲ್ಲಾಧ್ಯಕ್ಷರನ್ನಾಗಿ ನೇಮಿಸಬೇಕು. ಸತೀಶ್ ಕುಟುಂಬ ಹಿನ್ನೆಲೆ, ಸಂಘಟನಾ ಶಕ್ತಿ ಪರಿಗಣಿಸಬೇಕು. ಸಮುದಾಯದ ಮುಖಂಡ, ಚುನಾಯಿತ ಪ್ರತಿನಿಧಿಯಾಗಿರುವುದರಿಂದ ಸಂಘಟನೆಗೆ ಹೆಚ್ಚು ಶಕ್ತಿ ಬರಲಿದೆ ಎಂದು ಸಭೆಯಲ್ಲಿದ್ದ ಕೆಲ ನಾಯಕರು ಸತೀಶ್ ಹೆಸರನ್ನು ಪ್ರಸ್ತಾಪಿಸಿದ್ದಾರೆ.

ಕೋರ್ ಕಮಿಟಿ ಸಭೆಯಲ್ಲಿ ಮುಖಂಡರ ಅಭಿಪ್ರಾಯಗಳನ್ನು ಸಂಗ್ರಹಿಸಿದ ಅರುಣ್ ಶಹಾಪೂರ್‌ಮೂವರ ಹೆಸರನ್ನು ಅಂತಿಮಗೊಳಿಸಿ, ಪಕ್ಷದ ರಾಜ್ಯ ಸಮಿತಿಗೆ ನೀಡಿದ್ದಾರೆ. ಶೀಘ್ರವೇ ನೂತನ ಅಧ್ಯಕ್ಷ ಹೆಸರು ಯಾರೆಂಬುದು ಬಹಿರಂಗಗೊಳ್ಳಲಿದೆ.

ಅನಿಲ್ ವಿರುದ್ಧ ಅಸಮಾಧಾನ?: ಪಕ್ಷದ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು ಪಕ್ಷದ ಜವಾಬ್ದಾರಿ ವಹಿಸಿಕೊಂಡು ವರ್ಷವಾಗಿದೆ. ಆದರೆ, ಪಕ್ಷದ ರಾಷ್ಟ್ರ, ರಾಜ್ಯ, ಜಿಲ್ಲಾ ಸಮಿತಿಗಳನ್ನು ನೂತನವಾಗಿ ರಚನೆಗೆ ಮುಂದಾಗಿರುವುದರಿಂದ ಬಳ್ಳಾರಿಯಲ್ಲೂ ನೂತನ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಜರುಗಲಿದೆ.

ಪಕ್ಷದ ಮೂಲಗಳ ಪ್ರಕಾರ ಅನಿಲ್ ನಾಯ್ಡು ಪರ ಕೆಲ ನಾಯಕರು ಇದ್ದರೆ, ಹಲವರ ವಿರೋಧವೂ ಇದೆ ಎಂದು ಹೇಳಲಾಗುತ್ತಿದೆ. ವರ್ಷದಲ್ಲಿ ಸಂಘಟನಾ ಸಾಮರ್ಥ್ಯ ನಿರೂಪಿಸುವಲ್ಲಿ ಯಶಸ್ವಿಯಾಗಿಲ್ಲ ಎಂಬ ಆರೋಪವಿದೆ. ಪಕ್ಷದಲ್ಲಿ ಈ ರೀತಿಯ ಬೆಳವಣಿಗೆಗಳು ಸಹಜವಾದರೂ ಪಕ್ಷದ ರಾಜ್ಯ ಸಮಿತಿ ಯಾವ ನಿಲುವು ತೆಗೆದುಕೊಳ್ಳಲಿದೆ ಎಂಬುದರ ಮೇಲೆ ಎಲ್ಲವೂ ನಿಂತಿದೆ. ವಿಪ ಸದಸ್ಯ ಸತೀಶ್ ಪಕ್ಷದ ಜಿಲ್ಲಾ ಜವಾಬ್ದಾರಿ ನೀಡಿದರೆ ನಿಭಾಯಿಸುವುದಾಗಿ ಹೇಳಿದ್ದು, ಮೂವರ ಪೈಪೋಟಿಯಲ್ಲಿ ಜಿಲ್ಲಾಧ್ಯಕ್ಷ ಸ್ಥಾನ ದಕ್ಕುವುದು ಯಾರಿಗೆ ಎಂಬ ಕೌತುಕವಿದೆ.

ದೈನಂದಿನ ಆಹಾರದಲ್ಲಿ ಸಿರಿಧಾನ್ಯ ಬಳಕೆಯಿಂದ ಆರೋಗ್ಯ ವೃದ್ಧಿ

ಸಿರಿಧಾನ್ಯ ನಡಿಗೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪ್ರಶಾಂತಕುಮಾರ ಮಿಶ್ರಾ ಭಾಗಿ

ಸಿರಿಧಾನ್ಯ ಮತ್ತು ಸಾವಯವ ಮೇಳದ ಸಿರಿಧಾನ್ಯ ನಡಿಗೆ ಕಾರ್ಯಕ್ರಮಕ್ಕೆ ರೈತ ಮುಖಂಡರು ಚಾಲನೆ ನೀಡಿದರು.

- ಜಂಕ್‌ಫುಡ್ ಉಪಯೋಗಿಸುವುದರಿಂದ ಚಿಕ್ಕ ವಯಸ್ಸಿನಲ್ಲಿಯೇ ಆರೋಗ್ಯ ಕೆಡುತ್ತಲಿದೆ.
- ಇತ್ತೀಚಿನ ದಿನಗಳಲ್ಲಿ ಸಿರಿಧಾನ್ಯಗಳ ಬಳಕೆಯಿಂದಾಗುವ ಮಹತ್ವ ಕುರಿತು ಜಾಗೃತಿ ಹೆಚ್ಚಿದ್ದು, ಸಿರಿಧಾನ್ಯ ಬಳಕೆಯೂ ಕೂಡ ಹೆಚ್ಚಾಗುತ್ತಿದೆ.
- ಸಿರಿಧಾನ್ಯಗಳ ಬಳಕೆಯಿಂದ ಆರೋಗ್ಯವನ್ನು ಸುಧಾರಿಸಿಕೊಳ್ಳಬಹುದು.

• **ಕನ್ನಡಪ್ರಭ ವಾರ್ತೆ** ಬಳ್ಳಾರಿ

ಕಲಬೆರಕೆ ರಹಿತ ಮತ್ತು ಆರೋಗ್ಯವಂತರಾಗಿರಲು ಸಿರಿಧಾನ್ಯದಿಂದ ತಯಾರಿಸಿದ ಆಹಾರವನ್ನು ನಮ್ಮ ದೈನಂದಿನ ಆಹಾರ ಪದ್ಧತಿಯಲ್ಲಿ ಆಳವಡಿಸಿಕೊಳ್ಳುವುದರಿಂದ ಆರೋಗ್ಯವಂತರಾಗಿ ಬದುಕಬಹುದು ಎಂದು ಜಿಲ್ಲಾಧಿಕಾರಿ ಪ್ರಶಾಂತಕುಮಾರ್ ಮಿಶ್ರಾ ಹೇಳಿದರು.

ಅಂತರಾಷ್ಟ್ರೀಯ ಸಿರಿಧಾನ್ಯ, ಸಾವಯವ ಮೇಳದ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಆರಿವು ಮೂಡಿಸಲು ನಗರದ ರೈಲ್ವೆ ನಿಲ್ದಾಣ ರಸ್ತೆಯ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಏರ್ಪಡಿಸಿದ್ದ ಸಿರಿಧಾನ್ಯ ನಡಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಿರಿಧಾನ್ಯ ಸೇವನೆ ಆರೋಗ್ಯಕ್ಕೆ ಉತ್ತಮವಾಗಿದೆ. ರಾಸಾಯನಿಕ ಗೊಬ್ಬರ ಇಲ್ಲದೇ ಬೆಳೆಯುವ ಬೆಳೆ ಅಂದರೆ ಅವು ಸಿರಿಧಾನ್ಯಗಳು. ಹೀಗಾಗಿ ಮನೆಗಳಲ್ಲಿ ಹೆಚ್ಚಾಗಿ ಸಿರಿಧಾನ್ಯ ಉಪಯೋಗಿಸಬೇಕು ಎಂದರು.

ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಮಾತನಾಡಿ, ಸಿರಿಧಾನ್ಯಗಳಿಂದ ವಿವಿಧ ಖಾದ್ಯಗಳನ್ನು ತಯಾರಿಸುವ ಬಗೆಯ ಕುರಿತು ಜಾಗೃತಿ ಮೂಡಿಸಲು ಸಿರಿಧಾನ್ಯ ಪಾಕಸ್ಪರ್ಧೆ, ಸಿರಿಧಾನ್ಯ ಜಾಥಾ ಹಾಗೂ ಇದೇ ಜನವರಿ 23ರಿಂದ 25 ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ಅಂತರಾಷ್ಟ್ರೀಯ ವಾಣಿಜ್ಯ ಮೇಳ, ಸಾವಯವ ಮತ್ತು ಸಿರಿಧಾನ್ಯ ಮೇಳವನ್ನು ಆಯೋಜಿಸಲಾಗಿದ್ದು, ನಾವೆಲ್ಲರೂ ಇದರ ಸದುಪಯೋಗ ಪಡೆದುಕೊಳ್ಳೋಣ ಎಂದರು.

ಇದಕ್ಕೂ ಮುನ್ನ ಸಿರಿಧಾನ್ಯ ನಡಿಗೆ ಜಾಥಾಗೆ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಪಿ.ಗಾದೆಪ್ಪ, ರೈತ ಮುಖಂಡ ಪುರುಷೋತ್ತಮ ಗೌಡ, ಐನಾಥ ರೆಡ್ಡಿ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಚಾಲನೆ ನೀಡಿದರು.

ಜಾಥಾವು ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮುಂಭಾಗ, ಜೈನ್ ಮಾರ್ಕೆಟ್, ಎಚ್.ಆರ್. ಗವಿಯಪ್ಪ ವೃತ್ತದಿಂದ ಮರಳಿ ಡಿಸಿ ಕಚೇರಿ ಆವರಣಕ್ಕೆ ತಲುಪಿತು.

ಜಾಥಾ ನಡಿಗೆ ಉದ್ದಕ್ಕೂ ಸಿರಿಧ್ಯಾನ ಸೇವಿಸಿ ಅನಾರೋಗ್ಯ ದೂರವಿರಿಸಿ, ನವಣೆ ನಮ್ಮ ಆರೋಗ್ಯದ ನಿರ್ವಹಣೆ, ಜೋಳ ಇಲ್ಲದ ಊಟ ಬರೀ ಗೋಳಾಟ, ಸಿರಿಧಾನ್ಯ ಬಳಸು ಬಳ್ಳೆಯ ಜೀವನ ನಡೆಸು, ರಾಗಿ ಬಳಸಿ ಆರೋಗ್ಯ ಉಳಿಸಿ, ಬರಗು ಇದ್ದರೆ ಬರಗಾಲದಲ್ಲೂ ಬದುಕು ಎನ್ನುವ ಫಲಕಗಳನ್ನು ಪ್ರದರ್ಶಿಸಲಾಯಿತು.

ನಂತರ ಸವಿಯಲು ಸಿರಿಧಾನ್ಯಗಳಿಂದ ತಯಾರಿಸಿದ ನವಣೆ ಪಾಯಸ, ನವಣೆ ಬಾತ್, ಸಜ್ಜಿಯಿಂದ ಮಾಡಿದ್ದ ಉಪ್ಪಿಟ್ಟು ಹಾಗೂ ನವಣೆಯಿಂದ ಮಾಡಿದ ಅಂಬಲಿ ಟೀ ಮಾಡಲಾಗಿತ್ತು.

ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ, ಕೃಷಿ ಉಪನಿರ್ದೇಶಕ ಮಂಜುನಾಥ ಎಸ್.ಎನ್., ಸಹಾಯಕ ಕೃಷಿ ನಿರ್ದೇಶಕ ದಯಾನಂದ ಸೇರಿದಂತೆ ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷರು, ಕೃಷಿ ಅಧಿಕಾರಿಗಳು, ಅಧಿಕಾರಿ, ಸಿಬ್ಬಂದಿ ಇದ್ದರು.

ಕಾನೂನು ಕುರಿತು ಮಕ್ಕಳಿಗೆ ಶಾಲೆಗಳಲ್ಲಿ ಜಾಗೃತಿ ಮೂಡಿಸಿ

ಹೊಸಪೇಟೆಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೊಸಂಬೆ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ಆರ್‌ಟಿಇ ಮಕ್ಕಳ ಶಿಕ್ಷಣ ಹಕ್ಕಾಗಿದೆ. ಮಕ್ಕಳ ರಕ್ಷಣೆಗೆ ಇರುವ ಕಾನೂನುಗಳ ಬಗ್ಗೆ ಪ್ರತಿ ಶಾಲೆಯಲ್ಲಿ ಜಾಗೃತಿ ಮೂಡಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೊಸಂಬೆ ಹೇಳಿದರು.

ನಗರದ ಜಿಪಂ ಸಭಾಂಗಣದಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮಾತನಾಡಿದ ಅವರು, ಶಾಲೆಯಿಂದ ಹೊರ ಉಳಿದ 3200 ಮಕ್ಕಳನ್ನು ಪುನಃ ಶಾಲೆಗೆ ಕರೆತರುವಲ್ಲಿ ಶಿಕ್ಷಣ ಇಲಾಖೆ ತಳ ಮಟ್ಟದ ಅಧಿಕಾರಿಗಳು ಕೆಲಸ ಮಾಡುವ ಮೂಲಕ ಮಕ್ಕಳಿಗೆ ಶೈಕ್ಷಣಿಕ, ಸಾಮಾಜಿಕವಾಗಿ ಬೆಳವಣಿಗೆಗೆ ಸಹಕಾರಿಯಾಗಬೇಕು. ಶಾಲೆಯಲ್ಲಿ ಮಕ್ಕಳಿಗೆ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಿ ಅಗತ್ಯವಿರುವ ಶೌಚಾಲಯ, ಆಟದ ಮೈದಾನ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಇನ್ನಿತರ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಬೇಕು. ಮಕ್ಕಳ ರಕ್ಷಣಾ ನೀತಿ 2016ರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಆಣಿಯಾಗಬೇಕು. ಮಕ್ಕಳ ಸುರಕ್ಷಾ ಸಮಿತಿ, ಮಕ್ಕಳ ಹಕ್ಕುಗಳ ಸಂಘ, ಮಕ್ಕಳ ಸಹಾಯವಾಣಿ 1098, ಪೊಲೀಸ್ ಸಹಾಯವಾಣಿ 112, ಮಕ್ಕಳ ಸಮಸ್ಯೆಗಳಿಗೆ ಬರವಣಿಗೆ ಮೂಲಕ ಸಲಹಾ ಪೆಟ್ಟಿಗೆಗಳು ಆಳವಡಿಸುವ ಮೂಲಕ ಶಾಲೆಯಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆಗೆ ಪೂರಕ ವಾತಾವರಣ ನಿರ್ಮಿಸಬೇಕು ಎಂದು ತಿಳಿಸಿದರು.

ಸ್ಯಾಟ್ಸ್‌ನಿಂದ ಕೇಂದ್ರ ಸರ್ಕಾರದ ಆಪಾರ ತಂತ್ರಾಂಶದಲ್ಲಿ ಬಾಕಿ ಉಳಿದಿರುವ ಮಕ್ಕಳ ದಾಖಲಾತಿಯನ್ನು ತಿಂಗಳೊಳಗಾಗಿ ದಾಖಲಿಸಬೇಕು. ಜಿಲ್ಲೆಯಲ್ಲಿ 88 ಬಾಲ್ಯ ವಿವಾಹ ನಡೆದಿದ್ದು, 67 ಪ್ರಕರಣ ದಾಖಲಿಸಲಾಗಿದೆ. ಉಳಿದ 21 ಪ್ರಕರಣಗಳು ಯಾವ ಕಾರಣಕ್ಕಾಗಿ ದಾಖಲಿಸಿಲ್ಲ, ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಒಂದು ವಾರದೊಳಗೆ ದಾಖಲಿಸಬೇಕು. ವಿಫಲರಾದ ಅಧಿಕಾರಿಗಳ ವಿರುದ್ಧ ಬಾಲ್ಯವಿವಾಹ ನಿಷೇಧ ಕಾಯ್ದೆ ಪ್ರಕಾರ ಪ್ರಕರಣ ದಾಖಲಿಸಲಾಗುತ್ತದೆ ಎಂದರು.

ಮಕ್ಕಳಿಗೆ ಸಾರಿಗೆ ವ್ಯವಸ್ಥೆಯಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಸಂಬಂಧಪಟ್ಟ ಸಿಆರ್‌ಪಿ ಮತ್ತು ಮುಖ್ಯ ಗುರುಗಳ ಸಭೆ ಕರೆಯುವ ಮೂಲಕ ಮಾಹಿತಿ ಪಡೆದುಕೊಂಡು ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥಾಪಕರಿಂದ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಬೇಕು. ಅಕಾಲಿಕವಾಗಿ ಮರಣ ಹೊಂದುವ ವಿದ್ಯಾರ್ಥಿಗಳ ಕುಟುಂಬದವರಿಗೆ ಶಿಕ್ಷಣ ಇಲಾಖೆ ಹಾಗೂ ವಿವಿಧ ಇಲಾಖೆಯಿಂದ ಪರಿಹಾರವನ್ನು ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ವೆಂಕಟೇಶ ರಾಮಚಂದ್ರಪ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್‌ಉಂಕಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

ಭೂ ದಾಖಲೆಗಳ ಡಿಜಿಟಲೀಕರಣ ಕಾರ್ಯಕ್ರಮ